೯೨

13

17/12/2

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರವಿಕುಮಾರ್. ಎನ್, ವಿಪಮುಸ, ಶ್ರೀ ಡಿ.ಎಸ್.ಅರುಣ್, ಶ್ರೀ ಕೆ.ಎಸ್.ನವೀನ್, ಶ್ರೀ ಕೇಶವ ಪ್ರಸಾದ್ ಎಸ್. ಇವರು ನಿಯಮ-330ರಡಿಯಲ್ಲಿ ನೀಡಿರುವ ಸೂಚನೆಗೆ ಮಾನ್ಯ ಜವಳಿ ಕಬ್ಬು ಅಭಿವೃದ್ಧಿ & ಸಕ್ಕರೆ ಸಚಿವರ ಉತ್ತರ**

**ವಿಷಯ :** ದಿನಾಂಕ:08.11.2025 ರಂದು ಸರ್ಕಾರದ ಮುಖ್ಯಮಂತ್ರಿಗಳು, ಸರ್ಕಾರದ ಇನ್ನಿತರ ಸಚಿವರು ಹಾಗೂ ಸಕ್ಕರೆ ಕಾರ್ಖಾನೆ ಮಾಲಿಕರು ಮತ್ತು ಕಬ್ಬು ಬೆಳೆಗಾರರ ಸಭೆಯಲ್ಲಿ ಕಬ್ಬಿಗೆ ಬೆಲೆ ನಿಗಧಿ ಮತ್ತು ಸಕ್ಕರೆ ಮಾಲಿಕರಿಗೆ ಆಗುವ ಇನ್ನೀತರ ತೊಂದರೆಗಳ ಕುರಿತು ಚರ್ಚಿಸಿ ಸರ್ಕಾರದಿಂದ ಮಾಲಿಕರಿಗೆ ಆಗುವ ತೊಂದರೆಗಳನ್ನು ಸರ್ಕಾರವು ಸರಿಯಾಗಿ ಸ್ಪಂದಿಸುತ್ತದೆ ಮತ್ತು ಸಕ್ಕರೆ ಕಾರ್ಖಾನೆಗಳಿಂದ ವಿದ್ಯುತ್ ಖರೀಧಿಸಿ ಒಪ್ಪಂದ ಮಾಡಿಕೊಂಡು ಕಾರ್ಖಾನೆಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಲಾಗಿತ್ತು.

ಎಮ್.ಎಸ್.ಪಿ, ದರವನ್ನು ಹೆಚ್ಚಿಸುವುದು ಹಾಗೂ ಕಾರ್ಖಾನೆಗಳಿಂದ ಉತ್ಪಾದಿಸುವ ಸಂಪೂರ್ಣ ಇಥೆನಾಲ್ ದ್ರವ ಆಯಿಲ್ ಖರೀದಿಸುವಲ್ಲಿ ಕೇಂದ್ರ ಸರ್ಕಾರದಿಂದ ತ್ವರಿತವಾಗಿ ಹೊರಪಡಿಸುವುದರ ಕುರಿತು.

**<u>ಉತ್ತರ:-</u>**

2025-26 ನೇ ಹಂಗಾಮಿನಲ್ಲಿ ರೈತರು ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಸರಬರಾಜು ಮಾಡುವ ಮೆ.ಟನ್ ಕಬ್ಬಿಗೆ ಈ ಕೆಳಕಂಡ ಕಾರಣಗಳ ಹಿನ್ನಲೆಯಲ್ಲಿ ರೂ.3500/- ಗಳನ್ನು (ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚ ಹೊರತುಪಡಿಸಿ) ನಿಗಪಡಿಸಲು ರಾಜ್ಯ ರೈತ ಸಂಘಟನೆಗಳು ಮತ್ತು ರೈತ ಮುಖಂಡರು ಸರ್ಕಾರಕ್ಕೆ ಬೇಡಿಕೆ ಸಲ್ಲಿಸಿದ್ದರು.

i. ಕೇಂದ್ರ ಸರ್ಕಾರವು 2025-26 ನೇ ಹಂಗಾಮಿಗೆ ನಿಗದಿಪಡಿಸಿರುವ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯು ನ್ಯಾಯಯುತವಾಗಿ ಇಲ್ಲದೇ ಇರುವ ಕಾರಣ ರೈತರು ಬೆಳೆದ ಕಬ್ಬಿಗೆ ಸರಿಯಾದ ಬೆಲೆ ಸಿಗುತ್ತಿಲ್ಲ.
ii. ಕಬ್ಬಿನ ಉತ್ಪಾದನೆಗೆ ಆಗುವ ವೆಚ್ಚವನ್ನು ಗಣನೆಗೆ ತೆಗೆದುಕೊಳ್ಳದೇ ಸಕ್ಕರೆ ಇಳುವರಿ (Recovery) ಆಧಾರದ ಮೇಲೆ ಕಬ್ಬಿನ ಬೆಲೆ ನಿರ್ಧಾರ ಮಾಡುತ್ತಿರುವುದು.
iii. ಸಕ್ಕರೆ ಕಾರ್ಖಾನೆಗಳಲ್ಲಿನ ಸಕ್ಕರೆ ಇಳುವರಿ ವರದಿಯು ಕೂಡ ಪಾರದರ್ಶಕವಾಗಿಲ್ಲವೆಂದು, ಇದರಿಂದ ರೈತರಿಗೆ ಕಬ್ಬಿನ ದರದಲ್ಲಿ ವ್ಯತ್ಯಾಸವಾಗುತ್ತಿದ್ದು ಕೇಂದ್ರ ಸರ್ಕಾರವು ನಿಗಧಿಪಡಿಸಿರುವ ಎಫ್.ಆರ್.ಪಿ ದರವನ್ನು ಒಪ್ಪಲು ಸಾಧ್ಯವಿಲ್ಲ.

ಮೇಲ್ಕಂಡ ಬೇಡಿಕೆಗಳ ಹಿನ್ನೆಲೆಯಲ್ಲಿ, ದಿನಾಂಕ:07.11.2025ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳ ಮಾಲೀಕರು / ಪ್ರತಿನಿಧಿಗಳೊಂದಿಗೆ ಮತ್ತು ರಾಜ್ಯದ ಕಬ್ಬು ಬೆಳೆಗಾರರು ಹಾಗೂ ರೈತ ಸಂಘಟನೆಗಳ ಮುಖಂಡರು ಮತ್ತು ಪ್ರತಿನಿಧಿಗಳೊಂದಿಗೆ ಸುಧೀರ್ಘವಾಗಿ ಸಭೆಯನ್ನು ನಡೆಸಲಾಗಿರುತ್ತದೆ. ಸದರಿ ಸಭೆಯಲ್ಲಿ, ರಾಜ್ಯದ ಉತ್ತರ ಭಾಗದ ಕಬ್ಬು ನುರಿಸುವ ಹಂಗಾಮು ಪ್ರಾರಂಭವಾಗಿರುವುದರಿಂದ ರೈತರು ತಮ್ಮ ಕಬ್ಬಿಗೆ ಹೆಚ್ಚಿನ ಬೆಲೆಯನ್ನು

ನಿಗದಿಪಡಿಸುವಂತೆ ಒತ್ತಾಯಿಸಿ ಬೆಳಗಾವಿ ಜಿಲ್ಲೆಯ ಮೂಡಲಗಿ ತಾಲ್ಲೂಕಿನ ಗುರ್ಲಾಪುರ ಕ್ರಾಸ್‌ನಲ್ಲಿ ನಡೆಸುತ್ತಿರುವ ಪ್ರತಿಭಟನೆಯ ಕುರಿತು ಹಾಗೂ ಬೆಳಗಾವಿ ಜಿಲ್ಲೆಯ ವಿವಿಧ ಸಕ್ಕರೆ ಕಾರ್ಖಾನೆಗಳ ಮಾಲೀಕರು ಮತ್ತು ಪ್ರತಿನಿಧಿಗಳೊಂದಿಗೆ ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ ಇವರು ನಡೆಸಿರುವ ಸಭೆಗಳ ಕುರಿತು ಹಾಗೂ ಪ್ರತಿಭಟನಾ ಸ್ಥಳದಲ್ಲಿ ರೈತ ಪ್ರತಿನಿಧಿಗಳೊಂದಿಗೆ ನಡೆಸಿದ ಸಂಧಾನ ಸಭೆಗಳ ಕುರಿತು ಚರ್ಚಿಸಲಾಗಿರುತ್ತದೆ.

ರೈತರ ಪ್ರತಿಭಟನೆಗಳು ಬಾಗಲಕೋಟೆ, ವಿಜಯಪುರ ಕಲಬುರಗಿ, ಹಾವೇರಿ ಮತ್ತು ಇತರೆ ಜಿಲ್ಲೆಗಳಲ್ಲಿಯೂ ತೀವ್ರ ಸ್ವರೂಪ ಪಡೆದುಕೊಂಡಿರುವ ಕುರಿತು ಜಿಲ್ಲಾಧಿಕಾರಿಗಳು ವಿಡೀಯೋ ಕಾನ್ಫರೆನ್ಸ್ ಮೂಲಕ ಸಭೆಯ ಗಮನಕ್ಕೆ ತಂದಿದ್ದರು. ಕೇಂದ್ರ ಸರ್ಕಾರವು ರೈತರ ಕಬ್ಬಿಗೆ ನಿಗದಿಪಡಿಸಿರುವ ಎಫ್. ಆರ್.ಪಿ. ಯು ರೈತರಿಗೆ ಒಪ್ಪಿಗೆಯಾಗದೇ ಇರುವುದರಿಂದ ಮತ್ತು ಅನೇಕ ಕಾರ್ಖಾನೆಗಳು ರೈತರೊಂದಿಗೆ ಸಹಕಾರ ಮನೋಭಾವದೊಂದಿಗೆ ವ್ಯವಹರಿಸುವ ಉದ್ದೇಶದಿಂದ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಎಫ್.ಆರ್.ಪಿ ಗಿಂತ ಹೆಚ್ಚಿನ ದರವನ್ನು ಹಿಂದಿನ ವರ್ಷಗಳಲ್ಲಿ ಸಕ್ಕರೆ ಕಾರ್ಖಾನೆಗಳು ನೀಡಿರುವುದನ್ನು ಪರಿಗಣಿಸಿ, ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ 2025-26ನೇ ಹಂಗಾಮಿನಲ್ಲಿ ಸಕ್ಕರೆ ಕಾರ್ಖಾನೆಗಳು ಪಾವತಿಸಬೇಕಾದ ಕನಿಷ್ಠ ಹೆಚ್ಚುವರಿ ಕಬ್ಬು ಬೆಲೆಯನ್ನು ಇಳುವರಿ ಆಧಾರದ ಮೇಲೆ ನಿಗದಿಪಡಿಸಲು ಹಾಗೂ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ರಾಜ್ಯ ಸರ್ಕಾರದಿಂದ ಆರ್ಥಿಕ ನೆರವನ್ನು ನೀಡಲು ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ.

**ರೈತರ ಪ್ರಮುಖ ಬೇಡಿಕೆಗಳು:**

1. ಪ್ರಸಕ್ತ 2025-26 ನೇ ಸಾಲಿಗೆ ಪ್ರತಿ ಮೆ.ಟನ್ ಕಬ್ಬಿಗೆ ರೂ.3500/ ಗಳ ದರವನ್ನುನಿಗಧಿಪಡಿಸಬೇಕು (ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚ ಹೊರತುಪಡಿಸಿ)
2. ಸಕ್ಕರೆ ಕಾರ್ಖಾನೆಗಳು ಕಬ್ಬಿನ ತೂಕ ಮತ್ತು ಸಕ್ಕರೆ ಇಳುವರಿಯಲ್ಲಿ ರೈತರಿಗೆ ಮೋಸ ಮಾಡುತ್ತಿದ್ದು ಇದನ್ನು ತಡೆಯಲು ಕ್ರಮ ಕೈಗೊಳ್ಳಬೇಕು.
3. ಸಕ್ಕರೆ ಇಳುವರಿಯನ್ನು ಪರಿಶೀಲಿಸಲು ಸಕ್ಕರೆ ಕಾರ್ಖಾನೆಗಳ ಮುಂದೆ ಸರ್ಕಾರವೇ ಪ್ರಯೋಗಾಲಯಗಳನ್ನು ಸ್ಥಾಪನೆ ಮಾಡಬೇಕು.
4. ಕೆಲವೊಂದು ಸಕ್ಕರೆ ಕಾರ್ಖಾನೆಗಳು ರೈತರಿಗೆ ಪಾವತಿಸಲು ಕಬ್ಬಿನ ಬಿಲ್ಲು ಬಾಕಿ ಉಳಿಸಿಕೊಂಡಿದ್ದು ಈ ಬಾಕಿಗಳನ್ನು ಪಾವತಿಸಬೇಕು.

**ಸಕ್ಕರೆ ಕಾರ್ಖಾನೆಗಳ ಬೇಡಿಕೆಗಳು:-**

1. ಕೇಂದ್ರ ಸರ್ಕಾರವು ಸಕ್ಕರೆಗೆ ಕನಿಷ್ಠ ಮಾರಾಟ ಬೆಲೆಯನ್ನು ಪ್ರತಿ ಕೆ.ಜಿ. ಗೆ ರೂ.31/- ಗಳನ್ನು 2019 ರಲ್ಲಿ ನಿಗಧಿಪಡಿಸಿದ್ದು, ಕಳೆದ 06 ವರ್ಷಗಳಿಂದ ಸಕ್ಕರೆ ದರವನ್ನು ಹೆಚ್ಚಿಸಿರುವುದಿಲ್ಲ. ಆದರೆ ಕಬ್ಬಿನ ಬೆಲೆ ಎಫ್‌ಆರ್‌ಪಿ ಯನ್ನು ಪ್ರತಿ ವರ್ಷ ಹೆಚ್ಚಿಸುತ್ತಾ ಬಂದಿರುತ್ತದೆ. ಇದರಿಂದಾಗಿ ಸಕ್ಕರೆ ಕಾರ್ಖಾನೆಗಳಿಗೆ ಆರ್ಥಿಕವಾಗಿ ತೊಂದರೆಯಾಗಿರುತ್ತದೆ. ಆದ್ದರಿಂದ ಸಕ್ಕರೆಯ ಕನಿಷ್ಠ ಮಾರಾಟ ಬೆಲೆಯನ್ನು ಹೆಚ್ಚಿಸಬೇಕು.

2. ಕೇಂದ್ರ ಸರ್ಕಾರವು ಸಕ್ಕರೆ ರಫ್ತು ಮಾಡಲು ಅವಕಾಶ ನೀಡಬೇಕು.
3. ರಾಜ್ಯದ ಸಕ್ಕರೆ ಕಾರ್ಖಾನೆಗಳು ಉತ್ಪಾದಿಸುವ ಎಥನಾಲ್ ದರವನ್ನು ಪರಿಷ್ಕರಿಸಬೇಕು ಮತ್ತು ಉತ್ಪಾದನಾ ಪ್ರಮಾಣಕ್ಕನುಗುಣವಾಗಿ ಕೇಂದ್ರ ಸರ್ಕಾರವು ಎಥನಾಲ್ ಹಂಚಿಕೆಯನ್ನು ಮಾಡಬೇಕು.
4. ಹೊಸದಾಗಿ ಸಕ್ಕರೆ ಕಾರ್ಖಾನೆಗಳ ಸ್ಥಾಪನೆಯ ಸಂಬಂಧ ಬರುವ ಪ್ರಸ್ತಾವನೆಗಳಿಗೆ ಹಾಲಿ ಇರುವ ಸಕ್ಕರೆ ಕಾರ್ಖಾನೆಗಳಿಂದ ಕನಿಷ್ಠ 25 ಕಿ.ಮೀ ಅಂತರಕ್ಕೆ ಅವಕಾಶ ಕಲ್ಪಿಸುವುದು.
5. ರಾಜ್ಯ ಸರ್ಕಾರವು ಸಕ್ಕರೆ ಕಾರ್ಖಾನೆಗಳೊಂದಿಗಿನ ವಿದ್ಯುತ್ ಖರೀದಿ ಒಪ್ಪಂದವನ್ನು ನವೀಕರಿಸುವುದು.
6. ವಿದ್ಯುತ್ ಮಾರಾಟದ ಮೇಲೆ ರಾಜ್ಯ ಸರ್ಕಾರವು ಪ್ರತಿ ಯೂನಿಟ್‌ಗೆ ವಿಧಿಸಿರುವ ತೆರಿಗೆಯನ್ನು ಪುನರ್ ಪರಿಶೀಲಿಸುವುದು.
7. ಸಕ್ಕರೆ ಕಾರ್ಖಾನೆಗಳು ನದಿಯಿಂದ ಎತ್ತುವ ನೀರಿನ ತೆರಿಗೆಯನ್ನು ರಾಜ್ಯ ಸರ್ಕಾರವು ಹೆಚ್ಚಿಸಿರುವುದನ್ನು ಪುನರ್ ಪರಿಶೀಲಿಸುವುದು.

2025-26ನೇ ಹಂಗಾಮಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ಸಂಬಂಧಿಸಿದ ಸಕ್ಕರೆ ಕಾರ್ಖಾನೆಗಳು ಪಾವತಿಸಬೇಕಾದ ಕನಿಷ್ಠ ಹೆಚ್ಚುವರಿ ಕಬ್ಬು ಬೆಲೆಯನ್ನು ನಿಗದಿಪಡಿಸಲು ಹಾಗೂ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ರಾಜ್ಯ ಸರ್ಕಾರದಿಂದ ಆರ್ಥಿಕ ನೆರವನ್ನು ಒಂದು ಬಾರಿಯ ಕ್ರಮವಾಗಿ ಈ ಕೆಳಕಂಡಂತೆ ನಿಗದಿಪಡಿಸಿ ಆದೇಶಿಸಿದೆ.

| ಇಳುವರಿ | ಎಫ್.ಆರ್.ಪಿ (ಪ್ರತಿ ಮೆ.ಟನ್) (ಕಬ್ಬು ಕಟಾವು ಮತ್ತು ಸಾಗಾಣಿಕ ವೆಚ್ಚವನ್ನು ಒಳಗೊಂಡಂತೆ) (ರೂ.ಗಳಲ್ಲಿ) | ಸಕ್ಕರೆ ಕಾರ್ಖಾನೆಗಳು ಮೊದಲಿನ ಕಂತಿನಲ್ಲಿ ರೈತರಿಗೆ ನೀಡಲು ಒಪ್ಪಿರುವ ಮೊತ್ತ ರೂ.ಗಳಲ್ಲಿ (ಪ್ರತಿ ಮೆ.ಟನ್ ಗೆ) (ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚವನ್ನು ಹೊರತುಪಡಿಸಿ ) | ಎರಡನೇ ಕಂತಿನಲ್ಲಿ ಪಾವತಿಸಬೇಕಾದ ಮೊತ್ತ (ರೂ.ಗಳಲ್ಲಿ) | | | ಒಟ್ಟು ಮೊತ್ತ (ಕಬ್ಬು ಕಟಾವು ಮತ್ತು ಸಾಗಾಣಿಕೆ ವೆಚ್ಚವನ್ನು ಹೊರತುಪಡಿಸಿ) (ರೂ.ಗಳಲ್ಲಿ) |
|---|---|---|---|---|---|---|
| | | | ಸಕ್ಕರೆ ಕಾರ್ಖಾನೆಗಳು | ರಾಜ್ಯ ಸರ್ಕಾರ | ಒಟ್ಟು | |
| 1 | 2 | 3 | 4 | 5 | 6 | 7 (3+6) |
| 9.5% ಅಥವಾ ಕಡಿಮೆ | 3290.5 | ಕೇಂದ್ರ ಸರ್ಕಾರದ ಎಫ್.ಆರ್.ಪಿ ದರದನ್ವಯ ರೈತರಿಗೆ ನೀಡಲು ಒಪ್ಪಿರುವ ಮೊತ್ತ | 50 | 50 | 100 | ಕಾಲಂ 3 ರಲ್ಲಿನ ಮೊತ್ತಕ್ಕೆ ಎರಡನೇ ಕಂತಿನ ರೂ.100.00 ಗಳನ್ನು ಸೇರಿಸಿ ರೈತರಿಗೆ ನೀಡಬೇಕಾದ ಮೊತ್ತ |
| 10.25% | 3550 | 3100 | 50 | 50 | 100 | 3200.00 |
| 11.25% | 3896 | 3200 | 50 | 50 | 100 | 3300.00 |

- 10.25 - 9.5 % ಸಕ್ಕರೆ ಇಳುವರಿ ಪ್ರಮಾಣ ನಡುವೆ ಪ್ರತಿ 0.1 % ಕಡಿಮೆ ಸಕ್ಕರೆ ಇಳುವರಿಗೆ ಅನುಪಾತಕ್ಕೆ ಅನುಗುಣವಾಗಿ ರೂ.3.46 ಮೊತ್ತವನ್ನು ಪ್ರತಿ ಕ್ವಿಂಟಾಲ್‌ಗೆ ಪರಿಗಣಿಸುವುದು.

- 11.25 - 10.25 % ಸಕ್ಕರೆ ಇಳುವರಿ ಪ್ರಮಾಣದ ನಡುವೆ, ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಿದಂತೆ ಪ್ರತಿ 0.1 % ಕಡಿಮೆ ಸಕ್ಕರೆ ಇಳುವರಿಗೆ ಅನುಪಾತಕ್ಕೆ ಅನುಗುಣವಾಗಿ ರೂ.1.00 ಮೊತ್ತವನ್ನು ಪ್ರತಿ ಕ್ವಿಂಟಾಲ್‌ಗೆ ಪರಿಗಣಿಸುವುದು.

ಕಾರ್ಖಾನೆಗಳು ಪ್ರಥಮ ಕಂತಿನ ಮೊತ್ತವನ್ನು ಕಬ್ಬು (ನಿಯಂತ್ರಣ) ಕಾಯ್ದೆಯಡಿಯಲ್ಲಿ ನಿಗದಿಪಡಿಸಿರುವಂತೆ 14 ದಿನಗಳಲ್ಲಿ ಹಣವನ್ನು ರೈತರಿಗೆ ಸಂದಾಯ ಮಾಡತಕ್ಕದ್ದು ಎಂದು ಆದೇಶಿಸಲಾಗಿರುತ್ತದೆ. ಸದರಿ ಸರ್ಕಾರದ ಆದೇಶವನ್ನು ರಾಜ್ಯದ ಎಲ್ಲಾ ಸಕ್ಕರೆ ಕಾರ್ಖಾನೆಗಳು ಪಾಲಿಸಿರುತ್ತವೆ.

ರಾಜ್ಯದ ಉತ್ತರ ಭಾಗದಲ್ಲಿ ಸಕ್ಕರೆ ಕಾರ್ಖಾನೆಗಳು ನವೆಂಬರ್-2025ರ ಎರಡನೇ ವಾರದಿಂದ 2025-26ನೇ ಸಾಲಿನ ಕಬ್ಬು ಅರೆಯುವ ಕಾರ್ಯವನ್ನು ಪ್ರಾರಂಭಿಸಿರುತ್ತವೆ.

ಕಬ್ಬು ಬೆಳೆಗಾರ ರೈತರು ಮತ್ತು ಸಕ್ಕರೆ ಕಾರ್ಖಾನೆಗಳ ಬೇಡಿಕೆಗಳ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳು ದಿನಾಂಕ:06.11.2025 ಮತ್ತು 08.11.2025 ರಂದು ಸನ್ಮಾನ್ಯ ಪ್ರಧಾನ ಮಂತ್ರಿಗಳಿಗೆ ಪತ್ರ ಬರೆದಿರುತ್ತಾರೆ. ಅಲ್ಲದೇ ಮಾನ್ಯ ಮುಖ್ಯಮಂತ್ರಿಗಳು ಖುದ್ದಾಗಿ ಸನ್ಮಾನ್ಯ ಪ್ರಧಾನ ಮಂತ್ರಿಗಳನ್ನು ಭೇಟಿಯಾಗಿ ಮನವಿ ಪತ್ರವನ್ನು ನೀಡಿ ವಿಷಯದ ಬಗ್ಗೆ ಚರ್ಚೆ ಮಾಡಿರುತ್ತಾರೆ. ಜೊತೆಗೆ ಕಬ್ಬು ಬೆಳೆಗಾರರಿಗೆ ನ್ಯಾಯಯುತ ಮತ್ತು ಲಾಭದಾಯಕ ಬೆಲೆ (FRP) ಹೆಚ್ಚಿಸುವುದು, ಕಬ್ಬಿಗೆ ಬೆಲೆ ನಿಗದಿಗೊಳಿಸುವಾಗ ಸರಾಸರಿ ಮೂಲ ಸಕ್ಕರೆ ಇಳುವರಿಯನ್ನು ಶೇ.9.5 ಗಳೆಂದು ಪರಿಗಣಿಸುವುದು, FRP ದರವನ್ನು Ex-Gate ಬದಲಾಗಿ Ex-Field ದರವೆಂದು ಪರಿಗಣಿಸುವುದು ಸೇರಿದಂತೆ ಇನ್ನಿತರ ಬೇಡಿಕೆಗಳ ಬಗ್ಗೆ ಹಾಗೂ ಸಕ್ಕರೆ ಕಾರ್ಖಾನೆಗಳ ಪ್ರಮುಖ ಬೇಡಿಕೆಗಳಾದ ಸಕ್ಕರೆಯ ಕನಿಷ್ಠ ಮಾರಾಟ ಬೆಲೆ (MSP) ಹೆಚ್ಚಿಸುವುದು, ಕಬ್ಬಿನಿಂದ ಉತ್ಪಾದಿಸುವ ಎಥನಾಲ್ ದರ ಪರಿಷ್ಕರಣೆ ಮತ್ತು ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಹಂಚಿಕೆ ಮಾಡುವ ವಾರ್ಷಿಕ ಎಥನಾಲ್ ಪ್ರಮಾಣವನ್ನು ಹೆಚ್ಚಿಸುವುದು ಇತ್ಯಾದಿ ಬೇಡಿಕೆಗಳ ಬಗ್ಗೆ ಕೇಂದ್ರ ಗ್ರಾಹಕರ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ, ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವರಿಗೆ ದಿನಾಂಕ:06.11.2025 ಮತ್ತು 08.11.2025 ಮಾನ್ಯ ಮುಖ್ಯಮಂತ್ರಿಯವರು ಪತ್ರ ಬರೆದಿರುತ್ತಾರೆ.

ಮಾನ್ಯ ಮುಖ್ಯಮಂತ್ರಿಯವರ ಮನವಿ ನೀಡಿದ ನಂತರ ಕೇಂದ್ರ ಸರ್ಕಾರವು 2025-26ನೇ ಹಂಗಾಮಿನಲ್ಲಿ ದೇಶದ ಸಕ್ಕರೆ ಕಾರ್ಖಾನೆಗಳು 15.00 ಲಕ್ಷ ಮೆ.ಟನ್ ಸಕ್ಕರೆ ರಫ್ತು ಮಾಡಲು ಅನುಮತಿ ನೀಡಿರುತ್ತದೆ. ಇದರಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ 2.47 ಲಕ್ಷ ಮೆ.ಟನ್ ಸಕ್ಕರೆ ರಫ್ತು ಮಾಡಲು ಅವಕಾಶ ಕಲ್ಪಿಸಲಾಗಿದೆ. ಮುಂದುವರಿದು, ಉಳಿದ ಬೇಡಿಕೆಗಳ ಕುರಿತು ಕೇಂದ್ರ ಸರ್ಕಾರವು ಕೈಗೊಳ್ಳುವ ಕ್ರಮಗಳನ್ನು ನಿರೀಕ್ಷಿಸಲಾಗಿದೆ.

ರಾಜ್ಯದ ಸಕ್ಕರೆ ಕಾರ್ಖಾನೆಗಳು ಮತ್ತು ಎಥನಾಲ್ ಘಟಕಗಳಲ್ಲಿನ ಸಹ-ವಿದ್ಯುತ್ ಘಟಕಗಳಲ್ಲಿ ಉತ್ಪಾದನೆ ಮಾಡುವ ವಿದ್ಯುತ್ ಮೇಲಿನ ಕ್ಯಾಪ್ಟಿವ್ ಜೆನರೇಷನ್ ಟ್ಯಾಕ್ಸ್‌ಗೆ (ಸಿಜಿಟಿ) ವಿನಾಯಿತಿಯನ್ನು ನೀಡಲು ಕೋರಿರುವ, ರಾಜ್ಯದ ಸಕ್ಕರೆ ಕಾರ್ಖಾನೆಗಳು ಮತ್ತು ಎಥನಾಲ್ ಘಟಕಗಳಲ್ಲಿನ ಸಹ-ವಿದ್ಯುತ್ ಘಟಕಗಳಲ್ಲಿ ಉತ್ಪಾದನೆ ಮಾಡುವ ವಿದ್ಯುತ್‌ಅನ್ನು ಮುಕ್ತವಾಗಿ ರಫ್ತು ಮಾಡುವುದಕ್ಕೆ ಸಂಬಂಧಿಸಿದಂತೆ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ವಿಧಿಸುವ ಎಸ್.ಟಿ.ಯು ಶುಲ್ಕದಿಂದ ವಿನಾಯಿತಿಯನ್ನು ನೀಡಲು ಮತ್ತು ರಾಜ್ಯದ ಸಕ್ಕರೆ ಕಾರ್ಖಾನೆಗಳು ಮತ್ತು ಎಥನಾಲ್ ಘಟಕಗಳ ಜೊತೆಗೆ ಮಹಾರಾಷ್ಟ್ರ ರಾಜ್ಯದ ಮಾದರಿಯಲ್ಲಿ ವಿದ್ಯುತ್ ಖರೀದಿ ಒಪ್ಪಂದವನ್ನು ಮಾಡಿಕೊಳ್ಳಲು ಕೋರಿರುವ ಪ್ರಸ್ತಾವನೆಗಳ ಕುರಿತು ಸಕರಾತ್ಮಕ ಪರಿಶೀಲನೆಯನ್ನು ನಡೆಸಲು ದಿನಾಂಕ:07.11.2025ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ. ಸದರಿ ತೀರ್ಮಾನದನುಸಾರ ಸಕ್ಕರೆ ಕಾರ್ಖಾನೆಗಳು ಉತ್ಪಾದಿಸುವ ವಿದ್ಯುತ್ ಅನ್ನು ಪ್ರತಿ ಯುನಿಟ್‌ಗೆ ರೂ.6.5 ರಂತೆ 10 ವರ್ಷಗಳ ಅವಧಿಗೆ ಖರೀದಿಸಲು ಒಪ್ಪಂದ ಮಾಡಿಕೊಳ್ಳಲು ಮತ್ತು ವಿದ್ಯುತ್ ಸರಬರಾಜು ಮೇಲಿನ ಹೆಚ್ಚಿಸಿದ ಕರಗಳನ್ನು ಕೈಬಿಡಲು ಅಧ್ಯಕ್ಷರು, ದಕ್ಷಿಣ ಭಾರತ ಸಕ್ಕರೆ ಕಾರ್ಖಾನೆಗಳ ಒಕ್ಕೂಟ (ಕರ್ನಾಟಕ) ಬೆಂಗಳೂರು ಇವರು ಕೋರಿದ್ದು, ಸದರಿ ಮನವಿಯನ್ನು ಮುಂದಿನ ಅಗತ್ಯ ಕ್ರಮಕ್ಕಾಗಿ ಇಂಧನ ಇಲಾಖೆಗೆ ಕಳುಹಿಸಲಾಗಿದ್ದು, ಸದರಿ ಪ್ರಸ್ತಾವನೆಯು ಪ್ರಸ್ತುತ ಇಂಧನ ಇಲಾಖೆಯಲ್ಲಿ ಪರಿಶೀಲನೆಯಲ್ಲಿದೆ.

ರಾಜ್ಯದ ಸಕ್ಕರೆ ಕಾರ್ಖಾನೆಗಳು ಮತ್ತು ಎಥನಾಲ್ ಘಟಕಗಳಿಗೆ ಸರಬರಾಜು ಮಾಡುವ ನೀರಿನ ದರವನ್ನು ಪರಿಷ್ಕರಿಸುವ ಸಕರಾತ್ಮಕ ಪರಿಶೀಲನೆಯನ್ನು ನಡೆಸಲು ದಿನಾಂಕ:07.11.2025ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ. ಸಕ್ಕರೆ ಕಾರ್ಖಾನೆಗಳು ನದಿಗಳಿಂದ ಎತ್ತುವಳಿ ಮಾಡುವ ನೀರಿನ ಕರವನ್ನು ಪ್ರತಿ ಎಂ.ಸಿ.ಎಫ್.ಟಿ ಗೆ ರೂ.3,200/- ಎಂದು ನಿಗದಿಪಡಿಸಲು ಅಧ್ಯಕ್ಷರು, ದಕ್ಷಿಣ ಭಾರತ ಸಕ್ಕರೆ ಕಾರ್ಖಾನೆಗಳ ಒಕ್ಕೂಟ (ಕರ್ನಾಟಕ) ಬೆಂಗಳೂರು ಇವರು ಕೋರಿದ್ದು, ಸದರಿ ಮನವಿಯನ್ನು ಮುಂದಿನ ಅಗತ್ಯ ಕ್ರಮಕ್ಕಾಗಿ ಜಲ ಸಂಪನ್ಮೂಲ ಇಲಾಖೆಗೆ ಕಳುಹಿಸಲಾಗಿದ್ದು, ಸದರಿ ಪ್ರಸ್ತಾವನೆಯು ಪ್ರಸ್ತುತ ಜಲ ಸಂಪನ್ಮೂಲ ಇಲಾಖೆಯಲ್ಲಿ ಪರಿಶೀಲನೆಯಲ್ಲಿದೆ.

ರಾಜ್ಯದಲ್ಲಿ ಹೊಸದಾಗಿ ಸ್ಥಾಪನೆಯಾಗುವ ಸಕ್ಕರೆ ಕಾರ್ಖಾನೆಗಳ ಮತ್ತು ಎಥನಾಲ್ ಘಟಕಗಳ ನಡುವಿನ ಅಂತರವನ್ನು ಕನಿಷ್ಟ 15.00 ಕಿ.ಮೀ ಬದಲಿಗೆ 25.00 ಕಿ.ಮೀ ಎಂದು ಪರಿಗಣಿಸುವ ಕುರಿತು ಸಕರಾತ್ಮಕ ಪರಿಶೀಲನೆಯನ್ನು ನಡೆಸಲು ದಿನಾಂಕ:07.11.2025ರಂದು

ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ. ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆಗಳು ಮತ್ತು ಎಥನಾಲ್ ಘಟಕಗಳ ಸ್ಥಾಪನೆ ಕುರಿತು ಹೊಸ ನೀತಿಯನ್ನು ರೂಪಿಸುವುದಕ್ಕಾಗಿ ಸರ್ಕಾರದ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಎಂ.ಎಸ್.ಎಂ.ಇ ಮತ್ತು ಗಣಿ) ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯ ಪರಿಶೀಲನಾ ವಿಷಯಗಳಲ್ಲಿ ಸಕ್ಕರೆ ಕಾರ್ಖಾನೆಗಳ ನಡುವಿನ ಅಂತರದ ಕುರಿತ ವಿಷಯವು ಸಹ ಸೇರ್ಪಡೆಗೊಂಡಿರುತ್ತದೆ. ಪ್ರಸ್ತುತ, ಸದರಿ ಸಮಿತಿಯ ಅಂತಿಮ ವರದಿಯನ್ನು ನಿರೀಕ್ಷಿಸಲಾಗಿದೆ.

---

**ಸಂಖ್ಯೆ:** ಸಿಐ 140 ಎಸ್‌ಜಿಎಫ್ 2026

**(ಶಿವಾನಂದ ಎಸ್. ಪಾಟೀಲ)**
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು